**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ.391/2022**

ಪಿರ್ಯಾದುದಾರರು ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ಧ-

ಆರೋಪಿ/ತರು ಃ ಮಿಥುನ್ ಬಿನ್ ಶಿವರಾಜೇಗೌಡ, 21 ವರ್ಷ, ಮೆಡಿಕಲ್ ವಿದ್ಯಾರ್ಥಿ, ವಾಸಃ ಕನಕಪುರ, ರಾಮನಗರ ಜಿಲ್ಲೆ.

-ಃಆಪಾದನೆಃ-

ದಿನಾಂಕಃ 04.02.2021 ರಂದು ಬೆಳಗಿನ ಜಾವ 5-00 ರ ಸಮಯದಲ್ಲಿ ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ತರೀಕೆರೆ ಪಟ್ಟಣದಿಂದ ಶಿವಮೊಗ್ಗ ಕಡೆಗೆ ಹಾದುಹೋಗಿರುವ ರಸ್ತೆಯಲ್ಲಿರುವ ಲಕ್ಕವಳ್ಳಿ ಕ್ರಾಸ್ ಬಳಿ ಇರುವ ಕಟ್ಟೆಹೊಳೆ ಶನೇಶ್ವರ ದೇವಸ್ಥಾನಕ್ಕೆ ಹೋಗುವ ರಸ್ತೆಯಲ್ಲಿರುವ ಎನ್ ಹೆಚ್ 206 ರಸ್ತೆಯಲ್ಲಿ ಆರೋಪಿಯಾದ ನೀವು ನಿಮ್ಮ ಸ್ನೇಹಿತರಾದ ಚಾಸಾ-1 ಮತ್ತು ಭಾರ್ಗವ ಹಾಗೂ ಚಾಸಾ-2 ಮತ್ತು 3 ರವರನ್ನು ಜೂಮ್ ಕಂಪನಿಯ ಕೆಎ-03/ಎಜೆ-1375 ರ ಕಾರಿನಲ್ಲಿ ಕೂರಿಸಿಕೊಂಡು ಬೆಂಗಳೂರಿನಿಂದ ಶಿವಮೊಗ್ಗಕ್ಕೆ ಹೋಗುತ್ತಿರುವಾಗ ಆರೋಪಿಯಾದ ನೀವು ಕಾರನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಸದರಿ ಕಾರಿಗೆ ಯಾವುದೋ ಪ್ರಾಣಿ ಅಡ್ಡಬಂದಿದ್ದರಿಂದ ಅದನ್ನು ತಪ್ಪಿಸಲು ಹೋಗಿ ರಸ್ತೆಯ ಬಲಬದಿಯಲ್ಲಿದ್ದ ಮರಕ್ಕೆ ಡಿಕ್ಕಿ ಪಡಿಸಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ **279** ರೀತ್ಯಾ ಶಿಕ್ಷಾರ್ಹ ಅಪರಾಧಗಳನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು, ಆರೋಪಿಯಾದ ನೀವು ಮೇಲೆ ಹೇಳಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿ ಅಪಘಾತಪಡಿಸಿದ ಪರಿಣಾಮ ಚಾಸಾ-1 ಮತ್ತು 2 ರವರಿಗೆ ಸಾಮಾನ್ಯ ಮತ್ತು ತೀವ್ರ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆ

ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**337, 338** ರ ರೀತ್ಯಾ ಶಿಕ್ಷಾರ್ಹ ಅಪರಾಧಗಳನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೂರನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು, ಆರೋಪಿಯಾದ ನೀವು ಮೇಲೆ ಹೇಳಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿ ಅಪಘಾತಪಡಿಸಿದ ಪರಿಣಾಮ ಭಾರ್ಗವ್ ರವರಿಗೆ ತೀವ್ರ ಪೆಟ್ಟಾಗಿದ್ದು, ಅವರನ್ನು ಶಿವಮೊಗ್ಗದ ಮ್ಯಾಕ್ಸ್ ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲಿಸಿದ್ದು ನಂತರ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಮಹಾವೀರ್ ಜೈನ್ ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ನೀಡುತ್ತಿರುವಾಗ ಚಿಕಿತ್ಸೆ ಫಲಕಾರಿಯಾಗದೆ ದಿಃ20.02.2021 ರಂದು ಮೃತಪಟ್ಟಿರುತ್ತಾರೆ, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**304(ಎ)**ರ ರೀತ್ಯಾ ಶಿಕ್ಷಾರ್ಹ ಅಪರಾಧಗಳನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಪ್ರಶ್ನೆ-1 ಈಗ ಓದಿ ಹೇಳಿದ ನಿಮ್ಮ ಮೇಲೆ ಮಾಡಿರುವ ಆರೋಪಗಳು ತಿಳಿಯಿತೆ?

ಉತ್ತರಃ ಹೌದು

ಪ್ರಶ್ನೆ-2ಃ ಸದರಿ ಆರೋಪಗಳನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಉತ್ತರಃ ಇಲ್ಲ, ಪ್ರತಿರಕ್ಷೆ ಇದೆ

(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿ ವಿವರಿಸಿದ ನಂತರ ಆರೋಪಿ ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಳ್ಳಲಾಗಿದೆ.)

ದಿನಾಂಕಃ 27.06.2023

Sd/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ತರೀಕೆರೆ.

ಆರೋಪಿ/ತರ ಸಹಿಃ